**All India Radio: Bangalore**
**Regional Bulletin In Kannada**
**15.10.2025 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**15.10.2025 / 2.30 p.m.**

**<><><><>**

ಮುಖ್ಯಾಂಶಗಳು:

- ಕಿಸಾನ್ ಸಮ್ಮಾನ್ ಯೋಜನೆಯಿಂದ ರಾಜ್ಯದ ೪೩ ಲಕ್ಷ ರೈತರಿಗೆ ಪ್ರಯೋಜನ ; ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್
- ಸಾರ್ವಜನಿಕ ಸ್ಥಳಗಳಲ್ಲಿ ತೊಂದರೆ ನೀಡುವ ಸಂಘಟನೆಗಳ ನಿರ್ಬಂಧಕ್ಕೆ ಸರ್ಕಾರ ಚಿಂತನೆ
- ಬೆಂಗಳೂರಿನಲ್ಲಿ ಬಿ ಖಾತೆಗೆ ಎ ಖಾತಾ ಮಾನ್ಯತೆ ; ಆನ್‌ಲೈನ್ ವ್ಯವಸ್ಥೆಗೆ ಉಪಮುಖ್ಯಮಂತ್ರಿ ಚಾಲನೆ
- ರಾಜ್ಯದ ಉದ್ಯಮಿಗಳ ಹಿತ ಕಾಯಲು ಸರ್ಕಾರ ಬದ್ಧ ; ಗೃಹಸಚಿವ ಡಾ. ಜಿ. ಪರಮೇಶ್ವರ್
- ’ಸ್ವಚ್ಛ ಕೊಡಗು-ಸುಂದರ ಕೊಡಗು’ ಸ್ವಚ್ಛತಾ ಅಭಿಯಾನಕ್ಕೆ ಚಾಲನೆ

<><><><>

ದೇಶದ ರೈತರ ಹಿತಕಾಯಲು ಕೇಂದ್ರ ಸರ್ಕಾರ ಬದ್ಧವಾಗಿದೆ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ತಿಳಿಸಿದ್ದಾರೆ. ಕೊಪ್ಪಳದ ಮೆತಗಲ್ಲ ಗ್ರಾಮದಲ್ಲಿ ಹಣ್ಣುಗಳ ಸಂಸ್ಕರಣ ಘಟಕ ಲೋಕಾರ್ಪಣೆಗೊಳಿಸಿ ಮಾತನಾಡಿದ ಅವರು, ಕಿಸಾನ್ ಸಮ್ಮಾನ್ ಯೋಜನೆಯಿಂದ ರಾಜ್ಯದ ೪೩ ಲಕ್ಷ ರೈತರು ಪ್ರಯೋಜನ ಪಡೆದಿದ್ದಾರೆ. ರೈತರಿಗೆ ಜಿಎಸ್‌ಟಿಯಿಂದಲೂ ವಿನಾಯಿತಿ ನೀಡಲಾಗಿದೆ ಎಂದು ಹೇಳಿದ್ದಾರೆ. ರಸಗೊಬ್ಬರ, ಟ್ರಾಕ್ಟರ್‌ಗಳಿಗೆ ಜಿಎಸ್‌ಟಿಯಿಂದ ವಿನಾಯಿತಿ ನೀಡಲಾಗಿದ್ದು, ರೈತರು ಆಧುನಿಕ ಕೃಷಿಯತ್ತ ಗಮನ ಹರಿಸಬೇಕಾಗಿದೆ ಎಂದು ತಿಳಿಸಿದ್ದಾರೆ.

**ಧ್ವನಿ : ನಿರ್ಮಲಾ ಸೀತಾರಾಮನ್ (೪೦ ಸೆಕೆಂಡ್‌ಗಳು)**

ಇದಕ್ಕೂ ಮೊದಲು ಸಚಿವರು ರೈತರ ಜೊತೆ ಸಂವಾದ ನಡೆಸಿ, ಸಂಸ್ಕರಣಾ ಘಟಕದ ಮಾಹಿತಿ ಪಡೆದುಕೊಂಡರು.

<><><><>

ವಿಜಯನಗರ ಸಾಮ್ರಾಜ್ಯದ ವೈಭವದ ಕಥೆ ಹೇಳುವ ಎಲ್ಲ ಸ್ಮಾರಕಗಳ ಪುನರುಜ್ಜೀವನಕ್ಕೆ ನಾವೆಲ್ಲರೂ ಕೈಜೋಡಿಸಬೇಕಿದೆ ಎಂದು ಕೇಂದ್ರ ವಿತ್ತ ಸಚಿವೆ ನಿರ್ಮಲ ಸೀತಾರಾಮನ್ ತಿಳಿಸಿದ್ದಾರೆ. ವಿಶ್ವ ಪರಂಪರಾ ತಾಣವಾದ ಹಂಪಿಗೆ ಮೊಟ್ಟಮೊದಲ ಬಾರಿಗೆ ಭೇಟಿ ನೀಡಿ,

ವಿರೂಪಾಕ್ಷನ ದರ್ಶನ ಪಡೆದು ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಆಧುನಿಕ ಕಾಲದಲ್ಲಿ ನಮ್ಮ ಪರಂಪರೆ, ಸಂಸ್ಕೃತಿಯ ಪ್ರತೀಕಗಳಾದ ಪುರಾತನ ಸ್ಮಾರಕಗಳನ್ನು ಉಳಿಸಿಕೊಂಡು ಹೋಗುವ ಜವಾಬ್ದಾರಿ ನಮ್ಮ ಮೇಲಿದೆ. ಇದಕ್ಕಾಗಿ ಸ್ಥಳೀಯ ಆಡಳಿತದೊಂದಿಗೆ ಎಲ್ಲರೂ ಕೈ ಜೋಡಿಸಬೇಕಾದ ಅವಶ್ಯಕತೆ ಇದೆ ಎಂದರು. ಕೇಂದ್ರ ಸಚಿವರ ಭೇಟಿಯ ಹಿನ್ನೆಲೆಯಲ್ಲಿ ವಿರೂಪಾಕ್ಷೇಶ್ವರ ಸ್ವಾಮಿ, ಗಂಗಾಂಬಿಕೆ ಮತ್ತು ತಾಯಿ ಭುವನೇಶ್ವರಿ ಮೂರ್ತಿಗಳಿಗೆ ವಿಶೇಷ ಅಲಂಕಾರ ಮಾಡಲಾಗಿತ್ತು. ಇದೇ ಸಂದರ್ಭದಲ್ಲಿ ಹಂಪಿ ವಿದ್ಯಾರಣ್ಯ ಸಂಸ್ಥಾನದ ಭಾರತಿ ತೀರ್ಥ ಮಹಾಸ್ವಾಮಿಯವರನ್ನು ಭೇಟಿ ಮಾಡಿ ಸಚಿವರು ಮಾತುಕತೆ ನಡೆಸಿದರು.

<><><><>

ಆರ್.ಎಸ್.ಎಸ್ ಮಾತ್ರವಲ್ಲ ಸಾರ್ವಜನಿಕ ಸ್ಥಳಗಳಲ್ಲಿ ಜನರಿಗೆ ತೊಂದರೆ ಕೊಟ್ಟು ನಡೆಸುತ್ತಿರುವ ಎಲ್ಲಾ ಸಂಘಟನೆಗಳನ್ನು ನಿರ್ಬಂಧಿಸುವ ಬಗ್ಗೆ ಚಿಂತನೆ ನಡೆದಿದೆ ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಹಾಸನಾಂಬ ದರ್ಶನಕ್ಕೆ ಆಗಮಿಸಿದ ವೇಳೆ ಹಾಸನದ ಭುವನಹಳ್ಳಿ ಹೆಲಿಪ್ಯಾಡ್‌ನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೆಲ ಸಂಘಟನೆ ನಿರ್ಬಂಧದ ಬಗ್ಗೆ ಈಗಾಗಲೇ ತಮಿಳುನಾಡು ಸರ್ಕಾರ ಕ್ರಮ ಕೈಗೊಂಡಿದ್ದು, ಅದರ ಬಗ್ಗೆ ಮಾಹಿತಿ ಪಡೆದು ಪರಿಶೀಲನೆ ನಡೆಸಿ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದ್ದಾರೆ. ಜೆಡಿಎಸ್ ಶಾಸಕರ ಅನುದಾನ ತಾರತಮ್ಯ ಆರೋಪ ಕುರಿತು ಪ್ರತಿಕ್ರಿಯೆ ನೀಡಿದ ಮುಖ್ಯಮಂತ್ರಿಯವರು, ಸುಳ್ಳು ಹೇಳಿ ಜನರನ್ನು ದಾರಿ ತಪ್ಪಿಸುತ್ತಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಸ್ಥಳೀಯ ಸಂಸ್ಥೆಗಳ ಚುನಾವಣೆ ಕುರಿತು ಮಾತನಾಡಿದ “ತಾಲೂಕು ಪಂಚಾಯತ್, ಜಿಲ್ಲಾ ಪಂಚಾಯತ್ ಸೇರಿದಂತೆ ಎಲ್ಲ ಸ್ಥಳೀಯ ಸಂಸ್ಥೆಗಳ ಚುನಾವಣೆ ನಡೆಸಲು ಸರ್ಕಾರ ಸಿದ್ಧವಾಗಿದೆ. ನ್ಯಾಯಾಲಯದ ಆದೇಶವಾದ ತಕ್ಷಣ ಹಂತ ಹಂತವಾಗಿ ಚುನಾವಣೆ ನಡೆಸಲಾಗುವುದು ಎಂದು ಹೇಳಿದ್ದಾರೆ.

<><><><>

ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯ ಬಿ-ಖಾತಾ ನಿವೇಶನ ಮಾಲೀಕರಿಗೆ ಬಿ-ಖಾತಾದಿಂದ ಎ-ಖಾತಾಗೆ ಪರಿವರ್ತನೆ ಮತ್ತು ಹೊಸ ನಿವೇಶನಗಳಿಗೂ ಎ-ಖಾತಾ ನೀಡಲು ಜಾರಿಗೊಳಿಸಿರುವ ಆನ್‌ಲೈನ್ ವ್ಯವಸ್ಥೆಗೆ ಉಪ ಮುಖ್ಯಮಂತ್ರಿ ಹಾಗೂ ಬೆಂಗಳೂರು ನಗರಾಭಿವೃದ್ಧಿ ಸಚಿವರೂ ಆಗಿರುವ ಡಿ.ಕೆ ಶಿವಕುಮಾರ್ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಚಾಲನೆ ನೀಡಿದರು. ಕಾರ್ಯಕ್ರಮದಲ್ಲಿ, ಶಾಸಕರಾದ ವಿಜಯಾನಂದ್ ಕಾಶಪ್ಪನವರ್, ಶ್ರೀನಿವಾಸ್, ನಗರಾಭಿವೃದ್ಧಿ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ತುಷಾರ್

ಗಿರಿನಾಥ್, ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಮುಖ್ಯ ಆಯುಕ್ತ ಮಹೇಶ್ವರ್ ರಾವ್, ವಿಶೇಷ ಆಯುಕ್ತ ಮೌನೀಶ್ ಮೌದ್ಗಿಲ್ ಮತ್ತಿತರರು ಉಪಸ್ಥಿತರಿದ್ದರು.

<><><><>

ರಾಜ್ಯದಲ್ಲಿ ಬಂಡವಾಳ ಹೂಡಿಕೆ ಮಾಡಿರುವವರ ಹಿತ ಕಾಯಲು ಸರ್ಕಾರ ಬದ್ಧವಾಗಿದೆ ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ತಿಳಿಸಿದ್ದಾರೆ. ಮೈಸೂರಿನಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೈಗಾರಿಕೆಗಳು ಆಂಧ್ರಪ್ರದೇಶಕ್ಕೆ ಸ್ಥಳಂತರವಾಗುತ್ತಿದೆ ಎಂಬ ಕುರಿತಂತೆ ಪ್ರತಿಕ್ರಿಯಿಸಿದ ಅವರು, ರಾಜ್ಯದಲ್ಲಿ ಪರಿಸರ ವ್ಯವಸ್ಥೆ ಚೆನ್ನಾಗಿದ್ದು, ೧೦ ಲಕ್ಷ ಕೋಟಿ ರೂಪಾಯಿಗಳ ಒಡಂಬಡಿಕೆಗೆ ಸಹಿಯಾಗಿದೆ ಎಂದು ಹೇಳಿದ್ದಾರೆ. ಒಂದು ವೇಳೆ ರಾಜ್ಯದಲ್ಲಿ ಒಳ್ಳೆಯ ವಾತಾವರಣ ಇಲ್ಲ ಎನ್ನುದಾದರೆ ಬಂಡವಾಳ ಹೂಡಿಕೆಗೆ ಸಹಿ ಮಾಡುತ್ತಿರಲಿಲ್ಲ ಎಂದು ತಿಳಿಸಿದ್ದಾರೆ. ರಸ್ತೆ ಹಾಗೂ ಕೆಲವು ಸಣ್ಣಪುಟ್ಟ ಸಮಸ್ಯೆಗಳನ್ನು ಬಗೆಹರಿಸಲಾಗುವುದು ಆಶ್ವಾಸನೆ ನೀಡಿದ್ದಾರೆ. ಗೂಗಲ್ ಸಂಸ್ಥೆ ಆಂಧ್ರಪ್ರದೇಶಕ್ಕೆ ಹೋಗಿರುವುದಕ್ಕೆ ಹಲವು ಕಾರಣಗಳಿದ್ದು, ಕೈಗಾರಿಕಾ ಸಚಿವರು ಹಾಗೂ ಮುಖ್ಯಮಂತ್ರಿಗಳು ಅವರ ಚರ್ಚಿಸಲಿದ್ದಾರೆ ಎಂದು ತಿಳಿಸಿದ್ದಾರೆ.

<><><><>

ಕೂರ್ಗ್ ಹೋಟೇಲ್, ರೆಸಾರ್ಟ್ ಅಸೋಸಿಯೇಷನ್ ವತಿಯಿಂದ ವಿವಿಧ ಸಂಘಸಂಸ್ಥೆಗಳ ಸಹಯೋಗದಲ್ಲಿ ಇಂದು ಹಮ್ಮಿಕೊಳ್ಳಲಾಗಿದ್ದ ಸ್ವಚ್ಚ ಕೊಡಗು - ಸುಂದರ ಕೊಡಗು ಹೆಸರಿನ ಸ್ವಚ್ಚತಾ ಅಭಿಯಾನಕ್ಕೆ ಶಾಸಕ ಡಾ.ಮಂಥರ್ ಗೌಡ ಮತ್ತು ಜಿಲ್ಲಾಧಿಕಾರಿ ವೆಂಕಟ್ ರಾಜಾ ಚಾಲನೆ ನೀಡಿದರು. ಜಿಲ್ಲೆಯಾದ್ಯಂತ  ಅಭಿಯಾನಕ್ಕೆ ಅತ್ಯುತ್ತಮ ಸ್ಪಂದನೆ ದೊರಕಿದ್ದು, ವಿವಿಧೆಡೆ ಸಾವಿರಾರು ಸಂಖ್ಯೆಯಲ್ಲಿ ವಿವಿಧ ಸಂಘಸಂಸ್ಥೆಗಳ ಸದಸ್ಯರು ಸ್ವಚ್ಚತಾ ಅಭಿಯಾನದಲ್ಲಿ ಪಾಲ್ಗೊಳ್ಳುವ ಮೂಲಕ ಕೊಡಗಿನ ಸ್ವಚ್ಚತೆ ಕುರಿತು ಕಾಳಜಿ ತೋರಿದ್ದಾರೆ. ಕೊಡಗು  ಜಿಲ್ಲೆಯ ಸುಂದರ ಪ್ರಕೃತಿ, ಸಂಪನ್ಮೂಲ ಕಾಪಾಡದಿದ್ದರೆ ಭವಿಷ್ಯದಲ್ಲಿ ತೊಡಕು ಉಂಟಾಗುತ್ತದೆ. ಈಗಾಗಲೇ ಏಕಬಳಕೆ ಪ್ಲಾಸ್ಟಿಕ್‌ಅನ್ನು ನಿಷೇಧಿಸಲಾಗಿದೆ. ಮಡಿಕೇರಿಯಲ್ಲಿ ೨ ಲೀಟರ್‌ಗಿಂತ ಕಡಿಮೆ ಸಂಗ್ರಹ ಸಾಮರ್ಥ್ಯದ ನೀರಿನ ಬಾಟಲ್‌ಗಳ ಮಾರಾಟ, ಹಾಗೂ ಬಳಕೆ ನಿಷೇಧಿಸಲಾಗಿದೆ. ಇದರಿಂದ ಕಸದ ಪ್ರಮಾಣ ಕಡಿಮೆಯಾಗಿದೆ ಎಂದು ಡಾ.ಮಂಥರ್ ಗೌಡ ತಿಳಿಸಿದ್ದಾರೆ.

<><><><>

ಮಂಡ್ಯ-ಬೆಂಗಳೂರು-ಮೈಸೂರು ರಾಷ್ಟ್ರೀಯ ಹೆದ್ದಾರಿಯಲ್ಲಿ ಅಪೂರ್ಣಗೊಂಡಿರುವ ಕಾಮಗಾರಿಗಳನ್ನು ಒಂದು ವಾರದೊಳಗೆ ಪ್ರಾರಂಭ ಮಾಡುವಂತೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳಿಗೆ ಮದ್ದೂರು ಶಾಸಕ ಕೆ.ಎಂ.ಉದಯ್ ಸೂಚನೆ ನೀಡಿದ್ದಾರೆ. ಮಂಡ್ಯ ಜಿಲ್ಲೆಯ ಮದ್ದೂರು ತಾಲೂಕಿನ ನಿಡಘಟ್ಟ ಗ್ರಾಮದಿಂದ ಮದ್ದೂರು ನಗರದ ಪ್ರವಾಸಿ ಮಂದಿರದವರೆಗೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳು, ತಹಸೀಲ್ದಾರ್, ಭೂಸ್ವಾಧೀನ

ಅಧಿಕಾರಿಗಳು, ಎಂಜಿನಿಯರ್, ಗುತ್ತಿಗೆದಾರರು ಸೇರಿದಂತೆ ಕಾಮಗಾರಿಗೆ ಸಂಬಂಧಿಸಿದ ಎಲ್ಲಾ ಇಲಾಖೆ ಅಧಿಕಾರಿಗಳ ಜತೆಗೂಡಿ ಅಪೂರ್ಣ ಕಾಮಗಾರಿ ಪರಿಶೀಲನೆ ನಡೆಸಿ ಸ್ಥಳಿಯ ನಿವಾಸಿಗಳಿಂದ ಮಾಹಿತಿ ಪಡೆದುಕೊಂಡರು. ಹೆದ್ದಾರಿ ಮತ್ತು ಸರ್ವಿಸ್ ರಸ್ತೆಗಳ ಬಾಕಿಯಿರುವ ಕಾಮಗಾರಿಗಳನ್ನು ಶೀಘ್ರ ಪೂರ್ಣಗೊಳಿಸಲು, ಹಾಗೆಯೇ ಭೂಸ್ವಾಧೀನ ಪ್ರಕ್ರಿಯೆ ಹಾಗೂ ಕಾನೂನು ಕಾರ್ಯವಿಧಾನಗಳನ್ನು ತ್ವರಿತಗೊಳಿಸಲು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

<><><><>

ಬಾಗಲಕೋಟೆ ಜಿಲ್ಲೆಗೆ ಆಗಮಿಸಿದ ಕೇಂದ್ರದ ಉಪ ಕೃಷಿ ಮಾರುಕಟ್ಟೆ ಸಲಹೆಗಾರ ಬಿ.ಕೆ. ಪೃಷ್ಟಿ ನೇತೃತ್ವದ ಕೇಂದ್ರ ತಂಡ ವಿವಿಧ ಈರುಳ್ಳಿ ಕ್ಷೇತ್ರಗಳಿಗೆ ಭೇಟಿ ನೀಡಿ ಬೆಳೆ ಸ್ಥಿತಿಗತಿಯನ್ನು ವೀಕ್ಷಣೆ ಮಾಡಿದರು. ಜಿಲ್ಲೆಯ ವಿವಿಧ ಈರುಳ್ಳಿ ಬೆಳೆಯುವ ತಾಲೂಕುಗಳಿಗೆ ಇಂದು ಭೇಟಿ ನೀಡಿದ ಅವರು, ರೈತರಿಂದ ಹಾನಿಯ ಮಾಹಿತಿಯನ್ನು ಪಡೆದುಕೊಂಡು ನಂತರ ಬಾಗಲಕೋಟೆ ಕೃಷಿ ಮಾರುಕಟ್ಟೆ ಪ್ರಾಂಗಣಕ್ಕೆ ಭೇಟಿ ನೀಡಿ ಈರುಳ್ಳಿ ಮಾರಾಟದ ಹರಾಜು ಪ್ರಕ್ರಿಯೆಯನ್ನು ವೀಕ್ಷಣೆ ಮಾಡಿದರು. ನಂತರ ಜಿಲ್ಲಾಧಿಕಾರಿಯನ್ನು ಭೇಟಿ ಮಾಡಿ ಜಿಲ್ಲೆಯಲ್ಲಿ ಹಾನಿಗೊಳಗಾದ ಈರುಳ್ಳಿ ಬೆಳೆಯ ಮಾಹಿತಿಯನ್ನು ಪಡೆದುಕೊಂಡು ಹಾನಿ ಕುರಿತು ಸರ್ಕಾರಕ್ಕೆ ಪ್ರಸ್ತಾವನೆ ಕಳುಹಿಸುವುದಾಗಿ ಹೇಳಿದರು.

<><><><>

ಯಾದಗಿರಿ ಜಿಲ್ಲೆಯ ಬ್ಯಾಂಕ್ ಹಾಗೂ ಎಂಟಿಎಂ ಕೇಂದ್ರಗಳ ಸಮಗ್ರ ಭದ್ರತೆಗೆ ಅವಶ್ಯ ಕ್ರಮ ಕೈಗೊಳ್ಳಬೇಕು ಎಂದು ಯಾದಗಿರಿ ಜಿಲ್ಲಾಧಿಕಾರಿ ಹರ್ಷಲ್ ಭೋಯರ್ ಬ್ಯಾಂಕ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಜಿಲ್ಲಾ ಪೊಲೀಸ್ ಕಾರ್ಯಾಲಯದ ಸಭಾಂಗಣದಲ್ಲಿ ವಿವಿಧ ಬ್ಯಾಂಕ್ ಹಾಗೂ ಪೊಲೀಸ್ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಮಾತನಾಡಿದ ಅವರು, ಬ್ಯಾಂಕ್ ಹಾಗೂ ಎಟಿಎಂಗಳ ಭದ್ರತೆ ಹಾಗೂ ಸುರಕ್ಷತೆಗಾಗಿ ಆರ್‌ಬಿಐ ನಿರ್ದೇಶನಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>